ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಬುಧವಾರ, ದಿನಾಂಕ : 24ನೇ ಜುಲೈ, 2019

1.ವಿಲೇವಾರಿಯಾಗದೆ ಬಾಕಿ ಇರುವ ಕಡತಗಳ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

556 (699) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ: -

(ಅ) 2019 ಜೂನ್ ಅಂತ್ಯಕ್ಕೆ ಕಂದಾಯ ಇಲಾಖೆಯಲ್ಲಿ ವಿಲೇವಾರಿಯಾಗದೇ ಬಾಕಿ ಇರುವ ಕಡತಗಳೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಡತ ವಿಲೇವಾರಿ ಸಪ್ತಾಹದಲ್ಲಿ ಒಟ್ಟು ಎಷ್ಟು ಕಡತಗಳನ್ನು ವಿಲೇವಾರಿ ಮಾಡಲಾಗಿದೆ; ಬಾಕಿ ಇರುವ ಕಡತಗಳೆಷ್ಟು;

(ಇ) ಕಡತಗಳು ವಿಲೇವಾರಿಯಾಗದೆ ಬಾಕಿ ಉಳಿಯಲು ಕಾರಣಗಳೇನು; ಯಾವ ಹಂತದ ಅಧಿಕಾರಿಗಳ ಬಳಿ ಕಡತಗಳು ಬಾಕಿ ಉಳಿದಿರುತ್ತವೆ;

(ಈ) ಕಡತಗಳನ್ನು ವಿಲೇವಾರಿ ಮಾಡದೆ ಬಾಕಿ ಉಳಿಸಿಕೊಂಡ ಅಧಿಕಾರಿಗಳ ವಿರುದ್ಧ ಸಿ.ಸಿ.ಎ. ನಿಯಮಾವಳಿ ಅನ್ವಯ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಮುಂದಿನ ದಿನಗಳಲ್ಲಿ ಕಡತಗಳು ಬಾಕಿ ಉಳಿಯದಂತೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು?